**ದಿನಾಂಕಃ 17-03-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದ ಃ-**

ನಿಪಿ-6 ರಲ್ಲಿ ಬರೆದ ವಿಷಯ ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ ಸೀಲ್ಡ್ ಮಾಡಿ 8 ವಸ್ತುಗಳ ಮೇಲೆ ಅಂಟಿಸಿರುವ ಚೀಟಿಯಲ್ಲಿ ನನ್ನ ಸಹಿಗಳು ಇರುತ್ತದೆ, ಅದರ ಒಳಗೆ ಏನು ಇರುತ್ತದೆ ಎಂದು ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ ನಿಪಿ-8 ರಿಂದ 10 ಪೋಟೋಗಳನ್ನು ನೋಡಿ ಅವುಗಳಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿರುತ್ತಾರೆ, ಸದರಿ ಪೊಟೋಗಳನ್ನು ಯಾವ ವಿಚಾರಕ್ಕೆ ತೆಗೆದಿರುತ್ತಾರೆಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿಸಲಾಯಿತು)**

**ಪಾಟೀಸವಾಲು ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ-**

ದಿ.28.04.2024 ರಂದು ಬೆಳಿಗ್ಗೆ 8-00 ರಿಂದ 9-00 ಗಂಟೆಗೆ ಮಲ್ಲೇಕಾವು ಗ್ರಾಮದ ಕೆರೆ ಕೋಡಿ ಸಮೀಪ ಹನುಮಂತರಾಯಪ್ಪ ರವರ ಜಮೀನಿನಲ್ಲಿರುವ ಮನೆಯ ಮುಂಭಾಗದಲಿಲ ಚಾಸಾ-3 ಯಶೋಧಮ್ಮ ಹಾಜರಿದ್ದು ಘಟನಾ ಸ್ಥಳವನ್ನು ತೋರಿಸಿ ಸದರಿ ಜಾಗದಲ್ಲಿ ಆರೋಪಿ ರಾಮಚಂದ್ರಯ್ಯನಿಗೆ ಡ್ರಾಗನ್ ಮತ್ತು ಮಚ್ಚಿನಿಂದ ಹಲ್ಲೆ ಮಾಡಿರುತ್ತಾರೆಂದು ತಿಳಿಸಿದ್ದು ಪೊಲೀಸರು ಸ್ಥಳದಿಂದ ನ್ಯಾಯಾಲಯದ ಮುಂದೆ ಇರುವ 8 ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಸಿಕೊಂಡು ಪಂಚನಾಮೆ ಮಾಡಿ ನನ್ನ ಸಹಿ ತೆಗೆದುಕೊಂಡರು ಎಂದರೆ ಸರಿಯಲ್ಲ. ನನಗೆ ಎಲ್ಲಾ ಮಾಹಿತಿ ಗೊತ್ತಿದ್ದರೂ ಕೂಡ ಆರೋಪಿ ಮಾತು ಕೇಳಿ ನಾನು ಸುಳುಳ ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆ ಮಾಡುವಾಗ ನಿಪಿ-8 ರಿಂದ 10 ರಂತೆ ಪೊಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು:- ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

ಮರು ವಿಚಾರಣೆ ಇಲ್ಲ

(ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಒ ತಿ ಹೇ ಸ ಇದೆ.**

**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ತುಮಕೂರು-ಮಧುಗಿರಿ.**